ನೀನು ಹಿಂದೆ ಮಾಡಿದ ಒಳಿತುಗಳೊಂದಿಗೇ ಇಸ್ಲಾಂ ಧರ್ಮವನ್ನು ಸ್ವೀಕರಿಸಿರುವೆ

ಹಕೀಮ್ ಬಿನ್ ಹಿಝಾಮ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ರಿಂದ ವರದಿ. ಅವರು ಹೇಳಿದರು: ನಾನು ಕೇಳಿದೆ: "ಓ ಅಲ್ಲಾಹನ ಸಂದೇಶವಾಹಕರೇ! ಅಜ್ಞಾನ ಕಾಲದಲ್ಲಿ ನಾನು ದಾನ ಧರ್ಮ, ಗುಲಾಮ ವಿಮೋಚನೆ, ಕುಟುಂಬ ಸಂಬಂಧ ಜೋಡಿಸುವುದು ಮುಂತಾದ ಸತ್ಕರ್ಮಗಳನ್ನು ಮಾಡುತ್ತಿದ್ದೆ.
ಅದಕ್ಕಾಗಿ ನನಗೆ ಏನಾದರೂ ಪ್ರತಿಫಲ ದೊರೆಯುವುದೇ?" ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ
ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನೀನು ಹಿಂದೆ ಮಾಡಿದ ಒಳಿತುಗಳೊಂದಿಗೇ ಇಸ್ಲಾಂ ಧರ್ಮವನ್ನು ಸ್ವೀಕರಿಸಿರುವೆ."
[صحيح] [متفق عليه]

ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಲ್ಲಿ ವಿವರಿಸುವುದೇನೆಂದರೆ, ಸತ್ಯನಿಷೇಧಿಯಾಗಿದ್ದ ಒಬ್ಬ ವ್ಯಕ್ತಿ ಇಸ್ಲಾಂ ಧರ್ಮವನ್ನು ಸ್ವೀಕರಿಸಿದರೆ, ಅವನು ಸತ್ಯನಿಷೇಧಿಯಾಗಿದ್ದಾಗ ಮಾಡಿದ ದಾನ ಧರ್ಮ, ಗುಲಾಮ ವಿಮೋಚನೆ, ಕುಟುಂಬ ಸಂಬಂಧ ಜೋಡಿಸುವುದು ಮುಂತಾದ ಸತ್ಕರ್ಮಗಳಿಗೆ ಪ್ರತಿಫಲವನ್ನು ಪಡೆಯುತ್ತಾನೆ.

https://sunnah.global/hadeeth/kn/show/65016